ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ

# ಸ್ವಚ್ಛ ವಾಹಿನಿ ಚಾಲಕಿಯ ಸ್ವಾವಲಂಬಿ ಪಯಣ

ಸ್ವಚ್ಛ ಭಾರತ್ ಮಿಷನ್ (ಗ್ರಾ) ಯೋಜನೆಯು, ಗ್ರಾಮಗಳಲ್ಲಿ ಕಸ ವಿವೇವಾರಿ, ಶೌಚಾಲಯ ನಿರ್ಮಾಣ, ಬೂದು ನೀರು ನಿರ್ವಹಣೆ, ಮಲತ್ಯಾಜ್ಯ ಸಂಸ್ಕರಣೆ ಇನ್ನಿತರ ಸೌಲಭ್ಯಗಳನ್ನು ಅಭಿವೃದ್ಧಿ ಪಡಿಸುವ ಮೂಲಕ ಗ್ರಾಮಗಳನ್ನು ಅಭಿವೃದ್ಧಿಯ ದೆಸೆಯಲ್ಲಿ ಕೊಂಡೊಯ್ಯುವ ಉದ್ದೇಶವನ್ನು ಹೊಂದಿದೆ. ಅಭಿವೃದ್ಧಿಯ ಹಾದಿಯಲ್ಲಿ ಮಹಿಳಾ ಸಬಲೀಕರಣದ ಉದ್ದೇಶವನ್ನು ಸಹ ಈ ಯೋಜನೆ ಒಳಗೊಂಡಿರುವುದನ್ನು ಕುತೇಜ ಕುಬ್ರ ಎಂಬ ಮಹಿಳೆಯ ಸಾಧನೆಯ ಮೂಲಕ ತಿಳಿಯೋಣ ಬನ್ನಿ.

ಚಿಕ್ಕಮಗಳೂರು ಜಿಲ್ಲೆಯ ಚಿಕ್ಕಮಗಳೂರು ತಾಲ್ಲೂಕಿನ ಸತ್ತಿಹಳ್ಳಿ ಗ್ರಾಮ ಪಂಚಾಯಿತಿಯು ಜಿಲ್ಲಾ ಕೇಂದ್ರ ಸ್ಥಾನದಿಂದ 22 ಕಿ.ಮೀ. ಹಾಗೂ ತಾಲ್ಲೂಕು ಕೇಂದ್ರ ಸ್ಥಾನದಿಂದ 22 ಕಿ.ಮೀ. ದೂರದಲ್ಲಿದೆ. ಈ ಗ್ರಾಮ ಪಂಚಾಯಿತಿಯೂ 5 ಗ್ರಾಮಗಳನ್ನು ಒಳಗೊಂಡಿದ್ದು, 650 ಮನೆಗಳು ಇದರ ವ್ಯಾಪ್ತಿಗೆ ಬರುತ್ತವೆ. ಇಲ್ಲಿಯ ಮನೆಗಳಲ್ಲಿ ಉತ್ಪತ್ತಿಯಾದ ಕಸವನ್ನು ವಿಲೇವಾರಿ ಮಾಡುವುದೇ ದೊಡ್ಡ ಸಮಸ್ಯೆಯಾಗಿ ಪರಿಣಮಿಸಿತ್ತು.

ಗ್ರಾಮದ ಕಸ ವಿಲೇವಾರಿ ಸಮಸ್ಯೆಯನ್ನು ಗಮನದಲ್ಲಿಟ್ಟುಕೊಂಡು ಸ್ವಚ್ಛ ಭಾರತ್ ಮಿಷನ್(ಗ್ರಾ) ಯೋಜನೆ ಅಡಿಯಲ್ಲಿ ಗ್ರಾಮ ಪಂಚಾಯಿತಿಯವರು 15 ಲಕ್ಷ ರೂ. ವೆಚ್ಚದಲ್ಲಿ ಸ್ವಚ್ಛ ಸಂಕೀರ್ಣ ಘಟಕ ನಿರ್ಮಿಸಿದರು. ಬಳಿಕ ಮನೆ ಮನೆಗೂ ಕಸದ ಬುಟ್ಟಿಗಳನ್ನು ವಿತರಿಸಲಾಯಿತು. ಮನೆಗಳಿಂದ ಕಸ ಸಂಗ್ರಹಿಸಲು ಸ್ವಚ್ಛ ವಾಹಿನಿ ವ್ಯವಸ್ಥೆಯನ್ನು ಸಹ ಮಾಡಲಾಯಿತು. ಈ ಸ್ವಚ್ಛ ವಾಹಿನಿಯ ಚಾಲಕಿಯಾಗಿ ಕುತೇಜ ಕುಬ್ರ ಅವರು ಕೆಲಸ ನಿರ್ವಹಿಸುತ್ತಿದ್ದಾರೆ.

### ಸ್ವಚ್ಛ ವಾಹಿನಿ ಸಾರಥಿಯಾಗಿ ಕುತೇಜ ಕುಬ್ರ

ಸ್ವಚ್ಛ ಭಾರತದ ಕನಸನ್ನು ನನಸಾಗಿಸುವಲ್ಲಿ ಸ್ವ-ಸಹಾಯ ಸಂಘದ ಮಹಿಳೆಯರು ಒಂದು ಹೆಜ್ಜೆ ಮುಂದೆ ಇದ್ದಾರೆ. ಗ್ರಾಮೀಣ ಭಾಗದ ಮಹಿಳೆಯರು ಕೇವಲ ಮನೆ ಕೆಲಸ, ಕೃಷಿಗೆ ಸೀಮಿತವಾಗದೆ ಬೇರೆ ವಲಯದಲ್ಲೂ ತಮ್ಮನ್ನು ತಾವು ತೊಡಗಿಸಿಕೊಂಡಿದ್ದಾರೆ. ಇದೇ ಹಾದಿಯಲ್ಲಿ ಸಾಗಿದ ಚಿಕ್ಕಮಗಳೂರು ತಾಲ್ಲೂಕಿನ ಸತ್ತಿಹಳ್ಳಿ ಗ್ರಾಮದ ಕುತೇಜ ಕುಬ್ರ ಅವರು ಚಾಲನಾ ತರಬೇತಿ ಪಡೆದು ಸ್ವಚ್ಛ ವಾಹಿನಿಯ ಸಾರಥಿಯಾಗಿದ್ದು, ವಾರಕ್ಕೆ ಮೂರು ಬಾರಿ ಪ್ರತಿ ಮನೆಯಿಂದ ಕಸ ಸಂಗ್ರಹ ಮಾಡುತ್ತಿದ್ದಾರೆ.

### *ಗ್ರಾಮಸ್ಥರಲ್ಲಿ ನೈರ್ಮಲ್ಯದ ಜಾಗೃತಿ*

ಸ್ವಚ್ಛತೆಯನ್ನು ಕಾಪಾಡುವುದರಿಂದ ಆಗುವ ಲಾಭದ ಕುರಿತು ಸತ್ತಿಹಳ್ಳಿ ಗ್ರಾಮಸ್ಥರಿಗೆ ಕುತೇಜ ಕುಬ್ರ ಮನವರಿಕೆ ಮಾಡುತ್ತಿದ್ದಾರೆ. ಕಸ ಸಂಗ್ರಹಿಸುವಾಗ, ಕಸ ವಿಂಗಡಣೆ ಬಗ್ಗೆ ಮನೆ ಮನೆಗೂ ತೆರಳಿ ಜನರಿಗೆ ತಿಳಿ ಹೇಳುತ್ತಿದ್ದಾರೆ. ಗ್ರಾಮದ ಜನರೂ ಇವರಿಗೆ ಉತ್ತಮ ಸಹಕಾರ ನೀಡುತ್ತಿದ್ದಾರೆ.

ಕುತೇಜ ಕುಬ್ರ ಅವರ ಪತಿ ಸಣ್ಣ ಹೋಟೆಲ್ ಮಾಡಿಕೊಂಡು ಜೀವನ ನಿರ್ವಹಿಸುತ್ತಿದ್ದು, ಪತ್ನಿಯ ಕೆಲಸಕ್ಕೆ ಬೆನ್ನೆಲುಬಾಗಿ ನಿಂತಿದ್ದಾರೆ. ಸ್ವ-ಸಹಾಯ ಸಂಘಗಳು ಮತ್ತು ಒಕ್ಕೂಟದ ಮಹಿಳೆಯರಿಗೆ ವಾಹನ ಚಾಲನಾ ತರಬೇತಿ ನೀಡಲಾಗುತ್ತಿದೆ ಎನ್ನುವ ಮಾಹಿತಿ ಕುತೇಜ ಕುಬ್ರ ಅವರಿಗೆ ದೊರೆತ ತಕ್ಷಣ ಚಾಲನಾ ತರಬೇತಿ ಪಡೆದರು. ಪತಿಯ ಪ್ರೋತ್ಸಾಹ, ಗ್ರಾಮ ಪಂಚಾಯತಿ ಅಧಿಕಾರಿಗಳು ಹಾಗೂ ಗ್ರಾಮಸ್ಥರ ಸಹಕಾರದಿಂದ ಕುತೇಜ ಅವರು ಉತ್ತಮ ಕೆಲಸ ಮಾಡುತ್ತಿದ್ದು, ಸ್ವಾವಲಂಬಿಯಾಗಿ ಬದುಕುವ ಮೂಲಕ ಗ್ರಾಮದ ಮಹಿಳೆಯರಿಗೆ ಮಾದರಿಯಾಗಿದ್ದಾರೆ.

“ಕುತೇಜ ಕುಬ್ರ ಅವರು ಹಿಂಜರಿಕೆ ಬದಿಗಿಟ್ಟು ಚಾಲಕಿಯಾಗಿ ಕಾರ್ಯನಿರ್ವಹಿಸುತ್ತಿದ್ದಾರೆ. ಮಹಿಳೆಯರು ಎಲ್ಲಾ ಕ್ಷೇತ್ರಗಳಲ್ಲೂ ಮುಂದೆ ಬಂದು ತಮ್ಮ ಕುಟುಂಬಕ್ಕೆ ನೆರವಾಗುವ ಜತೆಗೆ ಆರ್ಥಿಕವಾಗಿ ಸಬಲರಾಗಬೇಕು. ಭಯ, ಹಿಂಜರಿಕೆಯ ಮನೋಭಾವ ಬಿಟ್ಟು ದುಡಿಮೆ ಮಾಡಬೇಕು, ಈ ನಿಟ್ಟಿನಲ್ಲಿ ಕುತೇಜ ಕುಬ್ರ ಮಾದರಿಯಾಗಿದ್ದಾರೆ”

**ಸಹದೇವ್**
**ಪಿಡಿಒ, ಸತ್ತಿಹಳ್ಳಿ ಗ್ರಾಮ ಪಂಚಾಯಿತಿ**

ಜಲೋತ್ಸವ · ಸ್ವಚ್ಛ ಸಂಕೀರ್ಣ

8277506000
ಏಕೀಕೃತ ಸಹಾಯವಾಣಿ

